ಕರ್ನಾಟಕ ವಿಧಾನಸಭೆ

(15ನೇ ವಿಧಾನಸಭೆ)

ಮೊದಲನೇ ಅಧಿವೇಶನ
(2ನೇ ಮುಂದುವರೆದ ಉಪವೇಶನ)

ಕಾರ್ಯಕಲಾಪಗಳ ಪಟ್ಟಿ

ಶುಕ್ರವಾರ, ದಿನಾಂಕ 13ನೇ ಜುಲೈ, 2018

(ಸಮಯ: ಬೆಳಿಗ್ಗೆ 10.30 ಗಂಟೆಗೆ)

1. ಶಾಸನ ರಚನೆ

I. ವಿಧೇಯಕಗಳನ್ನು ಪರ್ಯಾಲೋಚಿಸುವುದು ಹಾಗೂ ಅಂಗೀಕರಿಸುವುದು

1. **ಶ್ರೀ ಜಿ.ಟಿ.ದೇವೇಗೌಡ, (ಉನ್ನತ ಶಿಕ್ಷಣ ಸಚಿವರು) ಅವರು :-**

   ಅ) 2018ನೇ ಸಾಲಿನ ರೈ ತಾಂತ್ರಿಕ ವಿಶ್ವವಿದ್ಯಾಲಯ, ಬೆಂಗಳೂರು (ತಿದ್ದುಪಡಿ) ವಿಧೇಯಕವನ್ನು ಪರ್ಯಾಲೋಚಿಸಬೇಕೆಂದು ಸೂಚಿಸುವುದು.

   ಆ) ಹಾಗೂ ವಿಧೇಯಕವನ್ನು ಅಂಗೀಕರಿಸಬೇಕೆಂದು ಸೂಚಿಸುವುದು.

2. ನಿಯಮ 69ರ ಮೇರೆಗೆ ಸಾರ್ವಜನಿಕ ಮಹತ್ವದ ಜರೂರು ವಿಷಯದ ಬಗ್ಗೆ ಅಲ್ಪ ಕಾಲಾವಧಿ ಚರ್ಚೆ

1) **ಶ್ರೀಯುತರುಗಳಾದ ಆರ್. ಅಶೋಕ್, ವಿ. ಸುನಿಲ್ ಕುಮಾರ್, ಸಿ.ಟಿ. ರವಿ, ಅರವಿಂದ ಲಿಂಬಾವಳಿ, ವಿ. ಸೋಮಣ್ಣ, ಡಾ. ಭರತ್ ಶೆಟ್ಟಿ ಮತ್ತು ರಾಜೇಶ್ ನಾಯಕ್** ಇವರುಗಳು ಬೆಂಗಳೂರು ನಗರ ಸೇರಿದಂತೆ ರಾಜ್ಯಾದ್ಯಂತ ಡ್ರಗ್ಸ್, ಗಾಂಜಾ ಮತ್ತಿತರ ಮಾದಕ ವಸ್ತುಗಳಿಗೆ ಯುವಜನತೆ ಬಲಿಯಾಗುತ್ತಿರುವುದರಿಂದ, ವೈದ್ಯರ ಚೀಟಿ ಇಲ್ಲದೇ ಅಮಲುಮಿಶ್ರಿತ ಔಷಧ ಸೇರಿದಂತೆ, ಮಾತ್ರೆ, ಇಂಜೆಕ್ಷನ್‌ಗಳನ್ನು ಮಾರಾಟ ಮಾಡುತ್ತಿರುವ ಔಷಧಿ ಅಂಗಡಿಗಳಿಗೆ ಕಡಿವಾಣ ಹಾಕುವುದರ ಬಗ್ಗೆ ಚರ್ಚಿಸಲು ನೀಡಿರುವ ಸೂಚನೆಯ ಮೇಲೆ ಚರ್ಚೆ.

... 2/ ..

2) **ಶ್ರೀಯುತರುಗಳಾದ ಎ.ಟಿ. ರಾಮಸ್ವಾಮಿ, ಸಿ.ಎನ್. ಬಾಲಕೃಷ್ಣ, ಕೆ.ಎಂ. ಶಿವಲಿಂಗೇಗೌಡ, ಎಂ. ಶ್ರೀನಿವಾಸ ಮತ್ತು ಕೆ. ಮಹದೇವ** ಇವರುಗಳು ಕೇಂದ್ರ ಸರ್ಕಾರವು ರಚಿಸಿರುವ ಕಾವೇರಿ ನಿರ್ವಹಣಾ ಪ್ರಾಧಿಕಾರ ಮತ್ತು ಕಾವೇರಿ ಜಲನಿಯಂತ್ರಣ ಸಮಿತಿಗಳು ಕರ್ನಾಟಕ ಕಾವೇರಿ ನೀರಾವರಿ ಯೋಜನೆಗಳಲ್ಲಿ ನೀರು ಸಂಗ್ರಹಣೆ, ಹಂಚಿಕೆ ಮತ್ತು ಬೆಳೆ ಬೆಳೆಯುವ ಬಗ್ಗೆ ನಿಗಾ ವಹಿಸುವುದರಿಂದ ಮೈಸೂರು, ಚಾಮರಾಜನಗರ, ಮಂಡ್ಯ, ಕೊಡಗು, ಹಾಸನ, ಬೆಂಗಳೂರು ಮತ್ತು ತುಮಕೂರು ಜಿಲ್ಲೆಗಳಲ್ಲಿನ ರೈತರಿಗೆ ಅನ್ಯಾಯವಾಗುತ್ತಿರುವ ಬಗ್ಗೆ ಪ್ರಸ್ತಾಪಿಸಲು ನೀಡಿರುವ ಸೂಚನೆಯ ಮೇಲೆ ಚರ್ಚೆ.

3) **ಶ್ರೀಯುತರುಗಳಾದ ಟಿ.ಡಿ. ರಾಜೇಗೌಡ, ಈ. ತುಕಾರಾಂ ಮತ್ತು ಅರ್ಬೆಲ್ ಶಿವರಾಂ ಹೆಬ್ಬಾರ್** ಇವರುಗಳು 2019ರ ಶೈಕ್ಷಣಿಕ ವರ್ಷದಲ್ಲಿ ನೀಟ್ ಮತ್ತು ಜೆಇಇ ಪರೀಕ್ಷೆಗಳು ಆನ್‌ಲೈನ್ ಮೂಲಕ ನಡೆಯುವುದರಿಂದ, ರಾಜ್ಯದ ವಿದ್ಯಾರ್ಥಿಗಳು ಮತ್ತು ಗ್ರಾಮೀಣ ಭಾಗದ ವಿದ್ಯಾರ್ಥಿಗಳ ಹಿತದೃಷ್ಟಿಯಿಂದ ಸರ್ಕಾರ ಮಾಡಿಕೊಂಡಿರುವ ಸಿದ್ಧತೆ ಬಗ್ಗೆ ಪ್ರಸ್ತಾಪಿಸಲು ನೀಡಿರುವ ಸೂಚನೆಯ ಮೇಲೆ ಚರ್ಚೆ.

4) **ಶ್ರೀಯುತರುಗಳಾದ ಅಭಯ ಪಾಟೀಲ್, ಗೋವಿಂದ ಎಂ. ಕಾರಜೋಳ, ಸಿದ್ದು ಸವದಿ, ಕಳಕಪ್ಪ ಬಂಡಿ, ಮಹದೇವಪ್ಪ ಶಿ. ಯಾದವಾಡ, ದೊಡ್ಡನಗೌಡ ಜಿ. ಪಾಟೀಲ್ ಮತ್ತು ಹೆಚ್. ಹಾಲಪ್ಪ** ಇವರುಗಳು ಮರಳಿನ ಅಸಂಬದ್ಧ ನಿಯಮಾವಳಿಯಿಂದ ಅಕ್ರಮವಾಗಿ ಮರಳನ್ನು ಲೂಟಿ ಹೊಡೆಯಲು ಮರಳು ಮಾಫಿಯಾ ತೊಡಗಿರುವುದರಿಂದ ಹಾಲಿ ಇರುವ ನಿಯಮಗಳನ್ನು ಸರಳೀಕರಣ ಮಾಡುವ ವಿಚಾರದ ಬಗ್ಗೆ ಚರ್ಚಿಸಲು ನೀಡಿರುವ ಸೂಚನೆಯ ಮೇಲೆ ಚರ್ಚೆ.

3. ಗಮನ ಸೆಳೆಯುವ ಸೂಚನೆಗಳು

1) **ಶ್ರೀ ಪಿ. ರಾಜೀವ್** ಅವರು ರಾಯಭಾಗ ತಾಲ್ಲೂಕಿನಲ್ಲಿರುವ ಜೈನ ಸಮುದಾಯದವರಿಗೆ ಅಲ್ಪಸಂಖ್ಯಾತರ ಪ್ರಮಾಣ ಪತ್ರ ನೀಡುವ ಕುರಿತು ಮಾನ್ಯ ಕಂದಾಯ ಹಾಗೂ ಕೌಶಲ್ಯ ಅಭಿವೃದ್ಧಿ, ಉದ್ಯಮಶೀಲತೆ ಮತ್ತು ಜೀವನೋಪಾಯ ಸಚಿವರ ಗಮನ ಸೆಳೆಯುವುದು.

2) **ಶ್ರೀ ಮಸಾಲ ಜಯರಾಮ್** ಅವರು ತುಮಕೂರು ಜಿಲ್ಲೆ ತುರುವೇಕೆರೆ ವಿಧಾನಸಭಾ ಕ್ಷೇತ್ರದ ವ್ಯಾಪ್ತಿಯಲ್ಲಿ ಬರುವ ಸಿ.ಎಸ್.ಪುರ ಹೋಬಳಿಗೆ ಸೇರಿದ ಗುಂಡುತೋಪಿನಲ್ಲಿ ಪ್ರಭಾವಿ ವ್ಯಕ್ತಿಗಳು ಒತ್ತುವರಿ ಮಾಡಿಕೊಂಡಿರುವ ಗೋಮಾಳದ ಜಮೀನುಗಳನ್ನು ತೆರವುಗೊಳಿಸುವ ಬಗ್ಗೆ ಮಾನ್ಯ ಕಂದಾಯ, ಕೌಶಲ್ಯ ಅಭಿವೃದ್ಧಿ, ಉದ್ಯಮಶೀಲತೆ ಮತ್ತು ಜೀವನೋಪಾಯ ಸಚಿವರ ಗಮನ ಸೆಳೆಯುವುದು.

... 3/ ..

3) **ಶ್ರೀ ರಾಜಾ ವೆಂಕಟಪ್ಪ ನಾಯಕ್** ಅವರು ರಾಯಚೂರು ಜಿಲ್ಲೆಯ ಮಾನ್ವಿ ತಾಲ್ಲೂಕಿನಲ್ಲಿ ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡ ಹಾಗೂ ಮೊರಾರ್ಜಿ ದೇಸಾಯಿ ವಸತಿ ಶಾಲೆ ಮತ್ತು ವಸತಿ ನಿಲಯಗಳಿಗೆ ಮೂಲಭೂತ ಸೌಲಭ್ಯಗಳನ್ನು ಒದಗಿಸುವ ಬಗ್ಗೆ ಮಾನ್ಯ ಸಮಾಜ ಕಲ್ಯಾಣ ಸಚಿವರ ಗಮನ ಸೆಳೆಯುವುದು.

4) **ಶ್ರೀ ಉಮಾನಾಥ್ ಎ. ಕೋಟ್ಯಾನ್** ಅವರು ನೂತನವಾಗಿ ರಚಿಸಲಾಗಿರುವ ತಾಲ್ಲೂಕುಗಳ ಸಮರ್ಪಕ ಮತ್ತು ಸುವ್ಯವಸ್ಥಿತವಾದ ಕಾರ್ಯನಿರ್ವಹಣೆಗಾಗಿ ಸಕಾಲಿಕ ಕ್ರಮಗಳನ್ನು ಜರುಗಿಸುವ ಮೂಲಕ ನಾಗರೀಕರಿಗೆ ಅನುಕೂಲ ಮಾಡಿಕೊಡುವ ಬಗ್ಗೆ ಮಾನ್ಯ ಕಂದಾಯ, ಕೌಶಲ್ಯ ಅಭಿವೃದ್ಧಿ, ಉದ್ಯಮಶೀಲತೆ ಮತ್ತು ಜೀವನೋಪಾಯ ಸಚಿವರ ಗಮನ ಸೆಳೆಯುವುದು.

5) **ಶ್ರೀ ಎಂ.ವೈ. ಪಾಟೀಲ್** ಅವರು ಕಲಬುರಗಿ ಜಿಲ್ಲೆಯ ಅಫಜಲಪುರ ತಾಲ್ಲೂಕಿನಲ್ಲಿ ಮಳೆ ಅಭಾವದಿಂದ ಉಂಟಾಗಿರುವ ಪರಿಸ್ಥಿತಿಯ ಬಗ್ಗೆ ಮಾನ್ಯ ಕಂದಾಯ, ಕೌಶಲ್ಯ ಅಭಿವೃದ್ಧಿ, ಉದ್ಯಮಶೀಲತೆ ಮತ್ತು ಜೀವನೋಪಾಯ ಸಚಿವರ ಗಮನ ಸೆಳೆಯುವುದು.

6) **ಶ್ರೀ ಮಹಾದೇವಪ್ಪ ಶಿವಲಿಂಗಪ್ಪ ಯಾದವಾಡ** ಅವರು ರಾಜ್ಯದಲ್ಲಿ ಕಡಲೆ ಬೀಜವನ್ನು ಕನಿಷ್ಟ ರೂ. 8000/– ಬೆಂಬಲ ಬೆಲೆ ನೀಡುವ ಮೂಲಕ ಖರೀದಿಸುವಂತೆ ಕೃಷಿ ವಿಶ್ವವಿದ್ಯಾಲಯಗಳಿಗೆ ಆದೇಶ ನೀಡುವ ಕುರಿತು ಮಾನ್ಯ ಕೃಷಿ ಸಚಿವರ ಗಮನ ಸೆಳೆಯುವುದು.

7) **ಶ್ರೀ ಬಿ.ಎಂ. ಸುಕುಮಾರ್ ಶೆಟ್ಟಿ** ಅವರು ಕಂದಾಯ ಇಲಾಖೆಯ 94ಸಿ, 94ಸಿಸಿ ಯೋಜನೆ ಹಾಗೂ ಅಕ್ರಮ–ಸಕ್ರಮ ಯೋಜನೆಗಳ (ನಮೂನೆ–53ರಲ್ಲಿ) ಅರ್ಜಿ ವಿಲೇವಾರಿಯಲ್ಲಿ ವಿಳಂಬ ನೀತಿ ಅನುಸರಿಸುತ್ತಿರುವ ಕುರಿತು ಮಾನ್ಯ ಕಂದಾಯ, ಕೌಶಲ್ಯ ಅಭಿವೃದ್ಧಿ, ಉದ್ಯಮಶೀಲತೆ ಮತ್ತು ಜೀವನೋಪಾಯ ಸಚಿವರ ಗಮನ ಸೆಳೆಯುವುದು.

8) **ಶ್ರೀ ನೆಹರು ಚ. ಓಲೇಕಾರ** ಅವರು ಹಾವೇರಿ–ಹೆಗ್ಗೇರಿ ಕೆರೆಯ ದಡದಲ್ಲಿ ಕಟ್ಟಲಾಗಿರುವ ಟ್ಯಾಂಕಿಗೆ ಪೊಲೀಸ್ ಕ್ವಾಟ್ರಸ್‌ನ ಕೊಳಚೆ ನೀರು ಸೇರುತ್ತಿದ್ದು, ಆ ನೀರನ್ನು ಬೇಸಿಗೆಯಲ್ಲಿ ಹಾವೇರಿ ನಗರದ ಜನರಿಗೆ ಪೂರೈಸುತ್ತಿರುವುದರಿಂದ ಉಂಟಾಗಿರುವ ತೊಂದರೆಯ ಬಗ್ಗೆ ಮಾನ್ಯ ಪೌರಾಡಳಿತ, ಸ್ಥಳೀಯ ಸಂಸ್ಥೆಗಳು ಹಾಗೂ ಬಂದರು ಮತ್ತು ಒಳನಾಡು ಜಲಸಾರಿಗೆ ಸಚಿವರ ಗಮನ ಸೆಳೆಯುವುದು.

9) **ಶ್ರೀ ವೀರಭದ್ರಯ್ಯ (ವೀರಣ್ಣ) ಚರಂತಿಮಠ್** ಅವರು ಸರ್ಕಾರವು ಸಾಲ ಮನ್ನಾ ಯೋಜನೆ ಘೋಷಣೆ ಮಾಡಿದ ನಂತರ ಶ್ರೀನಿವಾಸ ಪತ್ತಿನ ಸಹಕಾರ ಸಂಘವು ಸಾಲವಿಲ್ಲದಿದ್ದವರ ಹೆಸರಿಗೆ ಹಣ ಜಮಾವನ್ನು ತೋರಿಸಿ ಸಂಘದಲ್ಲಿನ ಹಣವನ್ನು ದುರುಪಯೋಗ ಮಾಡಿಕೊಂಡು ಸರ್ಕಾರಕ್ಕೆ ವಂಚನೆ ಮಾಡಿರುವ ಬಗ್ಗೆ ಮಾನ್ಯ ಸಹಕಾರ ಸಚಿವರ ಗಮನ ಸೆಳೆಯುವುದು.

... 4/ ..

10) **ಶ್ರೀ ಜಿ. ಕರುಣಾಕರ ರೆಡ್ಡಿ** ಅವರು ಕಲಂ 371 (ಜೆ) ಸೌಲಭ್ಯಗಳನ್ನು ವಿಸ್ತರಿಸುವ ಸಂಬಂಧ ಹರಪನಹಳ್ಳಿ ತಾಲ್ಲೂಕನ್ನು ಬಳ್ಳಾರಿ ಜಿಲ್ಲೆಗೆ ಸೇರಿಸಲಾಗಿದ್ದು, ಸಾರ್ವಜನಿಕ ಹಿತದೃಷ್ಟಿಯಿಂದ ತಾಲ್ಲೂಕಿನ ಎಲ್ಲಾ ಸರ್ಕಾರಿ ಕಛೇರಿಗಳನ್ನು ಹರಪನಹಳ್ಳಿ ತಾಲ್ಲೂಕಿನಲ್ಲಿಯೇ ಮುಂದುವರೆಸುವ ಕುರಿತು ಮಾನ್ಯ ಮುಖ್ಯಮಂತ್ರಿಯವರ ಗಮನ ಸೆಳೆಯುವುದು.

11) **ಶ್ರೀ ಎಸ್. ರಾಮಪ್ಪ** ಅವರು ಹರಿಹರ ನಗರದಲ್ಲಿ ಕೈಗೊಳ್ಳಲಾಗಿರುವ ಯು.ಜಿ.ಡಿ. (ಒಳಚರಂಡಿ) ಕಾಮಗಾರಿಯು ಅತ್ಯಂತ ಕಳಪೆಮಟ್ಟದ್ದಾಗಿರುವುದರಿಂದ, ಸಂಬಂಧಪಟ್ಟವರ ವಿರುದ್ಧ ಕ್ರಮ ಜರುಗಿಸುವ ಬಗ್ಗೆ ಮಾನ್ಯ ವಸತಿ ಹಾಗೂ ನಗರಾಭಿವೃದ್ಧಿ ಸಚಿವರ ಗಮನ ಸೆಳೆಯುವುದು.

12) **ಶ್ರೀ ಮಹಾಂತೇಶ ಎಸ್. ಕೌಜಲಗಿ** ಅವರು ಬೆಳಗಾವಿ ಜಿಲ್ಲೆ ಬೈಲಹೊಂಗಲ ತಾಲ್ಲೂಕು ಹಾಗೂ ಸವದತ್ತಿ ತಾಲ್ಲೂಕು ವ್ಯಾಪ್ತಿಯಲ್ಲಿ ಬರುವ ಸರ್ಕಾರಿ ಪ್ರಾಥಮಿಕ ಶಾಲಾ ಕಟ್ಟಡಗಳು ಶಿಥಿಲಾವಸ್ಥೆಯಲ್ಲಿದ್ದರಿಂದ ಅವುಗಳನ್ನು ನೆಲಸಮ ಮಾಡಿ ತಾತ್ಕಾಲಿಕ ಶೆಡ್ಡುಗಳನ್ನು ನಿರ್ಮಿಸಿ ಶಾಲೆಗಳನ್ನು ನಡೆಸಲಾಗುತ್ತಿರುವುದರಿಂದ ಆ ಶಾಲೆಗಳ ಕಟ್ಟಡಗಳನ್ನು ನಿರ್ಮಾಣ ಮಾಡಲು ಕೂಡಲೇ ಕ್ರಮ ಕೈಗೊಳ್ಳುವ ಕುರಿತು ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಸಚಿವರ ಗಮನ ಸೆಳೆಯುವುದು.

13) **ಶ್ರೀ ಜಿ.ಬಿ. ಜ್ಯೋತಿ ಗಣೇಶ್** ಅವರು ಕೇಂದ್ರ ಸರ್ಕಾರದ ಮಹತ್ವಾಕಾಂಕ್ಷೆ ಯೋಜನೆಯಾದ ಸ್ಮಾರ್ಟ್ ಸಿಟಿ ಯೋಜನೆಗೆ ತುಮಕೂರು ನಗರ ಆಯ್ಕೆಯಾಗಿದ್ದು, ಸದರಿ ಯೋಜನೆ ಅನುಷ್ಠಾನಗೊಳಿಸುವಲ್ಲಿ ಜಿಲ್ಲಾಧಿಕಾರಿಗಳ ಅಧ್ಯಕ್ಷತೆಯ ಅಡ್ವೈಸರಿ ಫೋರಂ ಮತ್ತು ನಗರಾಭಿವೃದ್ಧಿ ಸಚಿವರ ಅಧ್ಯಕ್ಷತೆಯ ಇಂಪ್ಲಿಮೆಂಟೇಷನ್ ಮತ್ತು ರಿವ್ಯೂ ಕಮಿಟಿ ಯಾವುದೇ ಸಭೆಗಳನ್ನು ನಡೆಸದೆ ಸ್ಥಳೀಯ ಜನ ಪ್ರತಿನಿಧಿಗಳನ್ನು ಪರಿಗಣನೆಗೆ ತೆಗೆದುಕೊಳ್ಳದೇ ಕಾಮಗಾರಿಗಳನ್ನು ನಡೆಸುತ್ತಿರುವ ಬಗ್ಗೆ ಮಾನ್ಯ ವಸತಿ ಹಾಗೂ ನಗರಾಭಿವೃದ್ಧಿ ಸಚಿವರ ಗಮನ ಸೆಳೆಯುವುದು.

14) **ಶ್ರೀ ಎಂ. ಚಂದ್ರಪ್ಪ** ಅವರು ಹೊಳಲ್ಕೆರೆ ವಿಧಾನ ಸಭಾ ಕ್ಷೇತ್ರದ ಭರಮಸಾಗರ ಹೋಬಳಿ ಕೇಂದ್ರಕ್ಕೆ ಸರ್ಕಾರಿ ಪ್ರೌಢಶಾಲೆಯನ್ನು ಮಂಜೂರು ಮಾಡಿದ ನಂತರ 15 ದಿನಗಳಲ್ಲಿ ಮತ್ತೆ ವಾಪಸ್ಸು ಪಡೆದಿರುವುದರಿಂದ ವಿದ್ಯಾರ್ಥಿಗಳಿಗೆ ತೊಂದರೆಯಾಗಿರುವ ಬಗ್ಗೆ ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಸಚಿವರ ಗಮನ ಸೆಳೆಯುವುದು.

ಎಸ್. ಮೂರ್ತಿ
ಕಾರ್ಯದರ್ಶಿ.

ವಿಧಾನಸಭೆಯ ಕಾರ್ಯಕಲಾಪಗಳ ಪಟ್ಟಿಯನ್ನು ವೆಬ್‌ಸೈಟ್‌ನಲ್ಲಿಯೂ ಸಹ ಪಡೆದುಕೊಳ್ಳಬಹುದು.
http://kla.kar.nic.in/assembly/lob/lob.htm